ಕರ್ನಾಟಕ ಸರ್ಕಾರ

**ಜನವರಿ 31, 2018**

# ರಾಜ್ಯದ ಕಾರವಾರ ಮತ್ತು ಮಂಗಳೂರು ಬಂದರುಗಳಲ್ಲಿ ನಡೆದಿದೆ ಎನ್ನಲಾದ ಅಕ್ರಮ ಅದಿರು ಸಾಗಣೆಯ 76 ಪ್ರಕರಣಗಳ ಮರುವಿಚಾರಣೆ ವಿಶೇಷ ತನಿಖಾ ತಂಡಕ್ಕೆ ವರ್ಗಾವಣೆಗೆ ಸಂಪುಟ ನಿರ್ಣಯ

**ಬೆಂಗಳೂರು, ಜನವರಿ 31:**

ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ ಕೈಬಿಟ್ಟ ರಾಜ್ಯದ ಕಾರವಾರ ಹಾಗೂ ಮಂಗಳೂರು ಬಂದರು ಮೂಲಕ ನಡೆದಿದೆ ಎನ್ನಲಾದ ಅಕ್ರಮ ಅದಿರು ಸಾಗಣೆಯ 76 ಪ್ರಕರಣಗಳನ್ನು ರಾಜ್ಯದ ವಿಶೇಷ ತನಿಖಾ ತಂಡಕ್ಕೆ ವರ್ಗಾವಣೆ ಮಾಡಿ ಮರು ವಿಚಾರಣೆ ನಡೆಸಲು ರಾಜ್ಯ ಸಚಿವ ಸಂಪುಟ ಮಹತ್ವದ ನಿರ್ಣಯ ಕೈಗೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಸಂಪುಟ ಸಭೆಯ ನಂತರ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ ಬಿ. ಜಯಚಂದ್ರ ಅವರು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯವನ್ನು ಪ್ರಕಟಿಸಿದರು.

ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯಲ್ಲಿ ಕೋಟ್ಯಾಂತರ ರೂಪಾಯಿ ಮೌಲ್ಯದ ಕಬ್ಬಿಣದ ಅದಿರು ನಾಪತ್ತೆಯಾಗಿರುವ ಬಗ್ಗೆ ಸುದೀರ್ಘ ತನಿಖೆ ನಡೆಸಿ ಲೋಕಾಯುಕ್ತರು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ್ದ ಸವಿವರ ವರದಿ ಅನ್ವಯ ಸರ್ವೋಚ್ಚ ನ್ಯಾಯಾಲಯದ ಸೂಚನೆಯ ಮೇರೆಗೆ ರಾಜ್ಯ ಸರ್ಕಾರ ಈ ಪ್ರಕರಣವನ್ನು ಕೇಂದ್ರ ತನಿಖಾ ಸಂಸ್ಥೆ ( ಸಿ ಬಿ ಐ ) ಗೆ ವಹಿಸಿತ್ತು.

ಕಳೆದ ಹಲವಾರು ತಿಂಗಳುಗಳಿಂದ ತನಿಖೆ ನಡೆಸದೆ ಸೂಕ್ತ ಸಾಕ್ಷ್ಯಾಧಾರಗಳಿಲ್ಲ ಎಂದು ಸಿ ಬಿ ಐ ಈ ಪ್ರಕರಣವನ್ನು ರಾಜ್ಯ ಸರ್ಕಾರಕ್ಕೆ ವಾಪಸ್ ಕಳುಹಿಸಿತ್ತು. ಇದೀಗ ಅಕ್ರಮ ಗಣಿಗಾರಿಕೆ ಕುರಿತ ತನಿಖೆಯನ್ನು ವಿಶೇಷ ತನಿಖಾ ತಂಡದ ಮೂಲಕ ಮರು ತನಿಖೆ ನಡೆಸಲು ಕಳೆದ ಸಚಿವ ಸಂಪುಟ ಸಮ್ಮತಿ ನೀಡಿರುವ ಹಿನ್ನೆಲೆಯಲ್ಲಿ ರಾಜ್ಯದ ಗಣಿಗಾರಿಕೆಯಲ್ಲಿ ನಡೆದಿರುವ

ಅಕ್ರಮಗಳ ತನಿಖೆಗಾಗಿ ರಾಜ್ಯ ಲೋಕಾಯುಕ್ತದಿಂದ ರಚನೆಗೊಂಡ ವಿಶೇಷ ತನಿಖಾ ತಂಡದ ಅವಧಿಯನ್ನು ಪ್ರಸಕ್ತ ಸಾಲಿನ ಜನವರಿ 24 ರಿಂದ ಒಂದು ವರ್ಷದ ಅವಧಿಗೆ ವಿಸ್ತರಿಸಲು ಸಂಪುಟ ನಿರ್ಧರಿಸಿದೆ.

ಈ ಮೊದಲು ವಿಶೇಷ ತನಿಖಾ ತಂಡದಲ್ಲಿ ಒಟ್ಟು 73 ಪ್ರಕರಣಗಳು ದಾಖಲಾಗಿದ್ದವು. ಅವುಗಳ ಪೈಕಿ 28 ಪ್ರಕರಣಗಳಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಕೆಯಾಗಿದೆ. ಅಲ್ಲದೆ, 20 ಪ್ರಕರಣಗಳಲ್ಲಿ ವಿಚಾರಣೆಗೆ ನ್ಯಾಯಾಲಯದಿಂದ ತಡೆಯಾಜ್ಞೆ ಬಂದಿದೆ. ಒಂದು ಪ್ರಕರಣ ಬಿಡುಗಡೆ ಹೊಂದಿದೆ. ಏಳು ಪ್ರಕರಣಗಳು ವಿಚಾರಣೆಯ ಹಂತದಲ್ಲಿದೆ. ಎರಡು ಪ್ರಕರಣಗಳು ತನಿಖಾ ಹಂತದಲ್ಲಿದೆ. ಅಂತೆಯೇ, 19 ಪ್ರಕರಣಗಳಲ್ಲಿ ಬಿ ವರದಿ ಸಲ್ಲಿಕೆಯಾಗಿದೆ. ಎರಡು ಪ್ರಕರಣಗಳ ತನಿಖೆಗೆ ತಡೆಯಾಜ್ಞೆ ದೊರೆತಿದೆ. ಜೊತೆಗೆ 26 ಪ್ರಕರಣಗಳು ತನಿಖೆ ಪ್ರಗತಿಯಲ್ಲಿದೆ. ಐದು ಪ್ರಕರಣಗಳಲ್ಲಿ ಅಭಿಯೋಜನೆಗೆ ಇನ್ನೂ ಅನುಮತಿ ದೊರೆತಿಲ್ಲ. ಸಕ್ರಿಯವಾಗಿ ತನಿಖೆಯಲ್ಲಿರುವ ಪ್ರಕರಣಗಳ ಸಂಖ್ಯೆ 19. ಸಂಪುಟ ಇಂದಿನ ನಿರ್ಧಾರದಿಂದ ಇದೀಗ ಮತ್ತೆ 76 ಪ್ರಕರಣಗಳು ರಾಜ್ಯದ ವಿಶೇಷ ತನಿಖಾ ತಂಡದ ತನಿಖೆಯ ತೆಕ್ಕೆಗೆ ಒಳಪಡಲಿದೆ. ಬಹುತೇಕ ಪ್ರಕರಣಗಳಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಕೆಯಾಗಿರುವ ಹಿನ್ನೆಲೆಯಲ್ಲಿ ವಿಶೇಷ ತನಿಖಾ ತಂಡವು ಸಮರ್ಥವಾಗಿ ತನಿಖೆ ನಡೆಸಲು ಯಾವುದೇ ಕಾರ್ಯ ಒತ್ತಡವಿಲ್ಲ. ಆದಾಗ್ಯೂ ಅವಶ್ಯಕ ಸಿಬ್ಬಂದಿ ಅಥವಾ ಇನ್ನಿತರೆ ಸವಲತ್ತು ಸೌಲಭ್ಯ ಬಯಸಿದರೆ ಅವುಗಳನ್ನು ಸರ್ಕಾರ ಒದಗಿಸಲಿದೆ ಎಂದು ಜಯಚಂದ್ರ ಅವರು ಮಾಹಿತಿ ನೀಡಿದರು.

ರಾಜ್ಯದ 2,85,98,975 ಮೆಟ್ರಿಕ್ ಟನ್ ಕಬ್ಬಿಣದ ಅದಿರನ್ನು 1028 ಹಡಗಿನಲ್ಲಿ ತುಂಬಿ ಸಾಗಣೆ ಮಾಡಲಾಗಿದೆ. ಗೋವಾ, ಪಣಜಿ ಮತ್ತು ಮರ್ಮಗೋವಾ ಬಂದರಿನಲ್ಲಿ ನಡೆದಿದೆ ಎನ್ನಲಾದ ಪ್ರಕರಣಗಳನ್ನು ಸಿ ಬಿ ಐ ತನ್ನ ತನಿಖೆಯಲ್ಲಿ ಈಗಾಗಲೇ ಮುಕ್ತಾಯಗೊಳಿಸಿದೆ. ತಮಿಳು ನಾಡಿನ ಎರಡು ಬಂದರಿನಲ್ಲಿ ನಡೆದಿದೆ ಎನ್ನ ಪ್ರಕರಣಗಳಿಗೆ ಸಂಬಂಧಿಸಿದಂತೆ ಪ್ರಾಥಮಿಕ ತನಿಖೆ ನಡೆಸಲು ಸಿ ಬಿ ಐ ಗೆ ಇನ್ನೂ ಅನುಮತಿ ದೊರೆತಿಲ್ಲ. ಆಂಧ್ರ ಪ್ರದೇಶದಲ್ಲಿನ ಮೂರು ಬಂದರುಗಳಲ್ಲಿ ನಡೆದಿದೆ ಎನ್ನಲಾದ ಪ್ರಕರಣಗಳನ್ನು ಸಿ ಬಿ ಐ ತನಿಖೆ ನಡೆಸುತ್ತಿದೆ.

ಎಸ್ ಎಸ್ ಎಲ್ ಸಿ ಸಾರ್ವತ್ರಿಕ ಪರೀಕ್ಷೆ ನಡೆಸುವ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ದ್ವಿತೀಯ ವರ್ಷದ ಪದವಿ ಪೂರ್ವ ಸಾರ್ವತ್ರಿಕ ಪರೀಕ್ಷೆ ನಡೆಸುವ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪರೀಕ್ಷಾ ಏಕೀಕರಣ ನಿರ್ವಹಣಾ ವ್ಯವಸ್ಥೆಯನ್ನು ಮತ್ತಷ್ಟು ಪಾರದರ್ಶಕಗೊಳಿಸಿ

ಪ್ರಶ್ನಪತ್ರಿಕೆ ದತ್ತಾಂಶ ಕೋಶ, ಉತ್ತರ ಪತ್ರಿಕೆಯ ಮೌಲ್ಯ ಮಾಪನ, ಫಲಿತಾಂಶ ಸಂಕಲನಾ ವಿಧಾನ ಎಲ್ಲವನ್ನೂ ಏಕೀಕೃತಗೊಳಿಸಲು ರಾಜ್ಯ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ರಾಜ್ಯದ ಒಳನಾಡು ಮೀನುಗಾರಿಕೆ ಕಾರ್ಯನೀತಿ – 2016 ಕ್ಕೆ ಕೆಲವು ತಿದ್ದುಪಡಿ ಹಾಗೂ ಸೇರ್ಪಡೆಗಳನ್ನು ಮಾಡಿ ಸಂಪುಟ ಅನುಮೋದನೆ ನೀಡಿದೆ. ಇದರಿಂದ ಗುತ್ತಿಗೆ ನಿಯಮಾವಳಿಗಳನ್ನು ಸರಳೀಕರಣಗೊಳಿಸಿದಂತಾಗಿದೆ ಅಲ್ಲದೆ, ರಾಜ್ಯದ ಒಳನಾಡು ಮೀನುಗಾರಿಕೆ ಪ್ರದೇಶವನ್ನು ವಿಸ್ತರಿಸಲು ಪೂರಕವಾತಾವರಣ ಸೃಷ್ಟಿಸಿದಂತಾಗಿದೆ. ಅಂತೆಯೇ, ಪಾರಂಪರಿಕವಾಗಿ ಈ ಕಸುಬನ್ನು ಅವಲಂಭಿಸಿದ್ದ ವೃತ್ತಿನಿರತ ಬೆಸ್ತ, ಅಂಬಿಗ, ಬೋಯಿ, ರಾಜಬೋಯಿ ಮತ್ತಿತರ ಸಮುದಾಯಗಳಿಗೆ ಅನುಕೂಲವಾಗಲಿದೆ.

ರಾಜ್ಯಾದ್ಯಂತ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇಂದಿರಾ ಕ್ಯಾಂಟೀನ್ ತೆರೆಯಲು ಹೊರಡಿಸಲಾಗಿದ್ದ ಮಾರ್ಗಸೂಚಿಗಳನ್ನು ಎರಡನೇ ಬಾರಿಗೆ ಪರಿಷ್ಕರಣೆ ಮಾಡಿ ನೂತನ ನಿಯಮಾವಳಿ ಅನ್ವಯ ಸ್ಥಳೀಯ ಸಂಸ್ಥೆಗಳ ಸಹಭಾಗಿತ್ವದಲ್ಲಿ ಅಡುಗೆ ಕೋಣೆ ಸಹಿತ ಮತ್ತು ರಹಿತ ಒಳಗೊಂಡಂತೆ 173 ಕ್ಯಾಂಟೀನ್ ತೆರೆಯಲು ಸಂಪುಟ ಒಪ್ಪಿಗೆ ನೀಡಿದೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೆಗಾಲ ತಾಲ್ಲೂಕಿನ ಸರಗೂರು ಗ್ರಾಮದ ಬಳಿ ಕಾವೇರಿ ನದಿಯಿಂದ ನೀರನ್ನು ಎತ್ತಿ ಗುಂಡಾಳ ಜಲಾಶಯದ ಬಾಧಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸಲು ಹಾಗೂ ಕೊಳ್ಳೆಗಾಲ ತಾಲ್ಲೂಕಿನ ಎರಡು ಕೆರೆಗಳಿಗೆ 129 ಕೋಟಿ ರೂ. ವೆಚ್ಚದಲ್ಲಿ ನೀರು ತುಂಬಿಸುವ ಯೋಜನೆಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಹೆಬ್ಬಳ್ಳ ಚೆನ್ನಯ್ಯ ನಾಲೆಯ ಬಾಧಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸಲು ಹಾಗೂ 44 ಕೋಟಿ ರೂ. ವೆಚ್ಚದ ಏತ ನೀರಾವರಿ ಯೋಜನೆಯ ಮೂಲಕ 19,500 ಎಕರೆ ಪ್ರದೇಶಕ್ಕೆ ನೀರು ಹಾಯಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಭೀಮಾ ನದಿಯ ಉಪ ಪಾತ್ರದ ಕಲಬುರಗಿ ಜಿಲ್ಲೆಯ ಘತ್ತರಗ ಬ್ಯಾರೇಜ್‌ನ ಪುನಶ್ಚೇತನ ಹಾಗೂ ಹೊಸ ಗೇಟುಗಳ ಅಳವಡಿಕೆಗೆ ಸಂಬಂಧಿಸಿದಂತೆ 43 ಕೋಟಿ ರೂ. ಯೋಜನೆಯ ಕಾಮಗಾರಿಗಳಿಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಅಂತೆಯೇ, ಭೀಮಾ ನದಿಯ ಉಪ ಪಾತ್ರದ ಕಲಬುರಗಿ ಜಿಲ್ಲೆಯ ಕಲ್ಲೂರು–ಬಿ ಬ್ಯಾರೇಜ್ ಪುನಶ್ಚೇತನ ಮತ್ತು ಹೊಸ ಗೇಟುಗಳ ಅಳವಡಿಕೆಗೆ ಸಂಬಂಧಿಸಿದ 40 ಕೋಟಿ ರೂ. ಕಾಮಗಾರಿಗಳಿಗೂ ಸಂಪುಟ ಸಮ್ಮತಿಸಿದೆ.

ಬೆಳಗಾವಿ ಜಿಲ್ಲೆಯ ಸೂಳೆಬಾವಿ ಗ್ರಾಮದಲ್ಲಿ ರಾಡಾರ್ ಘಟಕ ಸ್ಥಾಪಿಸಲು ಭಾರತೀಯ ವಾಯು ಪಡೆಗೆ 250 ಎಕರೆ ಉಚಿತ ಜಮೀನು ಮಂಜೂರು ಮಾಡಲು ಸಂಪುಟ ಅನುಮೋದನೆ ನೀಡಿದೆ. ಸಾರ್ವಜನಿಕ ಉದ್ದೇಶದ ಯೋಜನೆಗಳಿಗಾಗಿ ಸರ್ಕಾರ ಮತ್ತು ಇತರ ಭೂ ಕೋರಿಕೆ ಸಂಸ್ಥೆಗಳು ಖಾಸಗಿ ಜಮೀನನ್ನು ನೇರವಾಗಿ ಖರೀದಿಸುವ ಕುರಿತಂತೆ ಹೊರಡಿಸಿರುವ ಮಾರ್ಗಸೂಚಿಗೆ ಹೆಚ್ಚುವರಿ ನಿರ್ಬಂಧ ವಿಧಿಸುವ ಅಂಶಗಳನ್ನು ಸೇರ್ಪಡೆ ಮಾಡಲು ಸಂಪುಟ ತೀರ್ಮಾನಿಸಿದೆ.

ಬೆಳಗಾವಿ ಕಣಬಿರಗಿ ಗ್ರಾಮದ ಜಮೀನುಗಳ ಭೂಮಾಲೀಕರ ಹಾಗೂ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಸಹಭಾಗಿತ್ವದಲ್ಲಿ ವಸತಿ ಯೋಜನೆಗೆ ನೀಡಿರುವ ಒಪ್ಪಿಗೆಗೆ ನ್ಯಾಯಾಲಯದ ಮುಂದೆ ಹೇಳಿಕೆ ಸಲ್ಲಿಸಲು ಸಂಪುಟ ಒಪ್ಪಿಗೆ ನೀಡಿದೆ.

ಉತ್ತರ ಕನ್ನಡ ಜಿಲ್ಲೆಯ ಕುಮುಟಾ ತಾಲ್ಲೂಕಿನ ಹಳೆವೆರವಟ್ಟಾ ಗ್ರಾಮದ ಲಯನ್ಸ್ ಹ್ಯೂಮ್ಯಾನಿಟೇರಿಯನ್ ಸರ್ವಿಸ್ ಟ್ರಸ್ಟ್‌ಗೆ ಗುತ್ತಿಗೆ ಆಧಾರದ ಮೇಲೆ ಒದಗಿಸಿರುವ 0.06 ಗುಂಟೆ ಜಮೀನನ್ನು ಅದೇ ಸಂಸ್ಥೆಗೆ ಖಾಯಂ ಆಗಿ ಮಂಜೂರು ಮಾಡಲು ಸಂಪುಟ ಒಪ್ಪಿಗೆ ನೀಡಿದೆ.

ಮೈಸೂರಿನ ಪೊಲೀಸ್ ಪಬ್ಲಿಕ್ ಶಾಲೆಯ ಹೆಚ್ಚುವರಿ ಕಾಮಗಾರಿಗಳಿಗಾಗಿ 12 ಕೋಟಿ ರೂ ಮಂಜೂರು ಮಾಡಲು ಸಂಪುಟ ನಿರ್ಧರಿಸಿದೆ.

ಬೆಂಗಳೂರು ನಗರದಲ್ಲಿ ಬಿ-ಟ್ರ್ಯಾಕ್ ಯೋಜನೆಯಡಿ ಸಿಂಕ್ರೋನೈಜ್ಡ್ ಪಾದಾಚಾರಿ ಮಾರ್ಗಗಳಲ್ಲಿನ ದೀಪಗಳು ಮತ್ತು ರಸ್ತೆ ಪರಿಕರಗಳನ್ನು ಒಳಗೊಂಡಂತೆ ಪ್ರಸ್ತುತ ಇರುವ 363 ಟ್ರಾಫಿಕ್ ಸಿಗ್ನಲ್‌ಗಳ ಉನ್ನತೀಕರಣ, ಅಳವಡಿಕೆ ಮತ್ತು ನಿರ್ವಹಣೆ ಹಾಗೂ ನೂತನ 100 ಟ್ರಾಫಿಕ್ ಜಂಕ್ಷನ್‌ಗಳಲ್ಲಿ ವಾಟ್ಸ್‌ಗಳನ್ನು ಒದಗಿಸಿ ಅಳವಡಿಸಲು 85.34 ಕೋಟಿ ರೂ. ವೆಚ್ಚಕ್ಕೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಗದಗ, ಕೊಪ್ಪಳ, ಚಾಮರಾಜನಗರ ವೈದ್ಯಕೀಯ ಕಾಲೇಜುಗಳಲ್ಲಿ ತಲಾ 100 ಕೋಟಿ ರೂ ವೆಚ್ಚದಲ್ಲಿ 450 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಗಳು ಹಾಗೂ ಕೊಡಗು ಮತ್ತು ಕೊಪ್ಪಳದಲ್ಲಿ ತಲಾ 20 ಕೋಟಿ ರೂ ಹಾಗೂ ಗದಗದಲ್ಲಿ 19 ಕೋಟಿ ರೂ ವೆಚ್ಚದಲ್ಲಿ ಅಲ್ಲಿನ ವೈದ್ಯಕೀಯ ಕಾಲೇಜುಗಳಲ್ಲಿ ಹೆಚ್ಚುವರಿ ವಸತಿ ನಿಲಯ ನಿರ್ಮಾಣಕ್ಕೆನ ಸಂಪುಟ ಅನುಮೋದನೆ ನೀಡಿದೆ.

ಹಾಸನ ಜಿಲ್ಲೆಯ ಚೆನ್ನರಾಯಪಟ್ಟಣ ತಾಲ್ಲೂಕು ಗೂರನಹಳ್ಳಿ ಗ್ರಾಮದಲ್ಲಿ ಸವಿತಾ ಸಮಾಜ ಸಮುದಾಯ ಭವನ ನಿರ್ಮಾಣಕ್ಕೆ ಮೂರು ಗುಂಟೆ ಸರ್ಕಾರಿ ಗೋಮಾಳ ಜಮೀನನ್ನು ಉಚಿತವಾಗಿ ನೀಡಲು ಸಂಪುಟ ಒಪ್ಪಿಗೆ ನೀಡಿದೆ.

ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ರಕ್ಷೀ ಗ್ರಾಮದ ಮುಫತ್ ಗಾಯರಾಣದಲ್ಲಿ **122.09** ಎಕರೆ ಜಮೀನಿನ ಪೈಕಿ ಒಂದು ಎಕರೆ ಜಮೀನನ್ನು ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದ ಕಟ್ಟಡಕ್ಕೆ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರು ಮಾಡಲು ಸಂಪುಟ ಅನುಮೋದನೆ ನೀಡಿದೆ.

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಕಸಬಾ ಹೋಬಳಿ ಲಕ್ಕವನಹಳ್ಳಿಯಲ್ಲಿ **20.09** ಎಕರೆ ಜಮೀನನ್ನು ಆಶ್ರಯ ಯೋಜನೆಯಡಿ ನಿವೇಶನ ರಹಿತರಿಗೆ ನಿವೇಶನ ಒದಗಿಸಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಲಯ ನಿಗಮಕ್ಕೆ ಉಚಿತವಾಗಿ ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಎಂ. ಕೆ. ಹುಬ್ಬಳ್ಳಿ ಗ್ರಾಮದ ಹದ್ದಿನಲ್ಲಿ ಗಂಗಾಂಭಿಕ ದೇವಸ್ಥಾನದ ಹತ್ತಿರ ಡಾರ್ಮಿಟ್ರಿ ನಿರ್ಮಾಣಕ್ಕೆ ಕರ್ನಾಟಕ ನೀರಾವರಿ ನಿಗಮದಿಂದ ಹತ್ತು ಗುಂಟೆ ಜಮೀನನ್ನು ಪ್ರವಾಸೋಧ್ಯಮ ಇಲಾಖೆಗೆ ಹಸ್ತಾಂತರಿಸಲು ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವ ಜಯಚಂದ್ರ ಅವರು ವಿವರಿಸಿದರು.

*************

ಡಿ ಪಿ ಎಂ